## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ರಾಜ್ಯ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗಕ್ಕೆ ಅಗತ್ಯ ಹುದ್ದೆಗಳನ್ನು ಸೃಜಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ ಸಕಇ 21 ಎಸ್‌ಎಡಿ 2003(2) ದಿ:20.02.2003.
2. ಸರ್ಕಾರದ ಆದೇಶ ಸಂಖ್ಯೆ ಸಕಇ 58 ಎಸ್‌ಎಡಿ 2003 ದಿ:20.06.2003.
3. ಸರ್ಕಾರದ ಆದೇಶ ಸಂಖ್ಯೆ ಸಕಇ 196 ಎಸ್‌ಎಡಿ 2005 ದಿ:28.10.2005.
4. ಸರ್ಕಾರದ ಆದೇಶ ಸಂಖ್ಯೆ ಸಕಇ 57 ಎಸ್‌ಎಡಿ 2003 ದಿ:13.03.2007.
5. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅನುಸೂಚಿತ ಜಾತಿ ಮತ್ತು ಬುಡಕಟ್ಟುಗಳ ಆಯೋಗದ ಪತ್ರ ಸಂಖ್ಯೆ ಕರಾ/ಅಜಾ/ಅಬು/ಸಿಆರ್-/2012-13 ದಿ:01.06.2013.

******

<u>ಪ್ರಸ್ತಾವನೆ</u>:

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶ ದಿನಾಂಕ:20.02.2003ರಲ್ಲಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷರ ಆಪ್ತ ಶಾಖೆಗೆ, ಆಪ್ತ ಕಾರ್ಯದರ್ಶಿ, ಪ್ರಥಮ ದರ್ಜೆ ಸಹಾಯಕರು, ಶೀಘ್ರಲಿಪಿಗಾರರು, ಗ್ರೂಪ್ 'ಡಿ' ವಾಹನ ಚಾಲಕರ ವೃಂದದ ಒಟ್ಟು 6 ಹುದ್ದೆಗಳನ್ನು ಸೃಜಿಸಲಾಗಿರುತ್ತದೆ

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶ ದಿನಾಂಕ:20.06.2003ರಲ್ಲಿ ಸದರಿ ಆಯೋಗಕ್ಕೆ ಕಾರ್ಯದರ್ಶಿ, ಕಛೇರಿ ಅಧೀಕ್ಷಕರು, ಪ್ರಥಮ ದರ್ಜೆ ಸಹಾಯಕರುಗಳ ಒಟ್ಟು 4 ಹುದ್ದೆಗಳನ್ನು ಸೃಜಿಸಲಾಗಿರುತ್ತದೆ. ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿನ ಸರ್ಕಾರದ ಆದೇಶ ದಿನಾಂಕ:28.10.2005ರಲ್ಲಿ ಸಂಶೋಧನಾ ಅಧಿಕಾರಿ ಮತ್ತು ಸಹಾಯಕ ಸಾಂಖ್ಯಿಕ ಅಧಿಕಾರಿಯ ಒಟ್ಟು 2 ಹುದ್ದೆಗಳನ್ನು ಸೃಜಿಸಲಾಗಿರುತ್ತದೆ. ಮೇಲೆ ಕ್ರಮ ಸಂಖ್ಯೆ (4)ರಲ್ಲಿನ ಸರ್ಕಾರದ ಆದೇಶ ದಿನಾಂಕ:13.03.2007ರಲ್ಲಿ ದ್ವಿತೀಯ ದರ್ಜೆ ಸಹಾಯಕರು, ಬೆರಳಚ್ಚುಗಾರರು, ಗ್ರೂಪ್ 'ಡಿ' ಸೇರಿ ಒಟ್ಟು 3 ಹುದ್ದೆಗಳು ಸೇರಿ ಒಟ್ಟಾರೆ 15 ಹುದ್ದೆಗಳನ್ನು ಸೃಜಿಸಿ ಆದೇಶಿಸಲಾಗಿರುತ್ತದೆ.

ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅನುಸೂಚಿತ ಜಾತಿ ಮತ್ತು ಬುಡಕಟ್ಟುಗಳ ಆಯೋಗ, ಇವರು ಮೇಲೆ ಓದಲಾದ ಕ್ರಮ ಸಂಖ್ಯೆ: 05ರಲ್ಲಿನ ಪತ್ರದಲ್ಲಿ ಕರ್ನಾಟಕ ರಾಜ್ಯ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಕೆಲಸ ಕಾರ್ಯಗಳು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿರುವುದರಿಂದ ವಿವಿದ ವೃಂದಗಳಲ್ಲಿ ಒಟ್ಟು 27 ಹುದ್ದೆಗಳನ್ನು ಹೆಚ್ಚುವರಿಯಾಗಿ ಸೃಜಿಸುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

### <u>ಸರ್ಕಾರಿ ಆದೇಶ ಸಂಖ್ಯೆ: ಸಕಇ 275 ಎಸ್‌ಎಡಿ 2012, ಬೆಂಗಳೂರು ದಿನಾಂಕ: 25-10-2013</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಅನುಸೂಚಿತ ಜಾತಿ ಹಾಗೂ ಅನುಸೂಚಿತ ಬುಡಕಟ್ಟು ಆಯೋಗದ ಕಛೇರಿ ನಿರ್ವಹಣೆಗೆ ಹಾಗೂ ಕಾರ್ಯಕ್ರಮಗಳನ್ನು ಕಾರ್ಯಗತಗೊಳಸಲು ಈ ಕೆಳಕಂಡ 15 ಹುದ್ದೆಗಳನ್ನು ಹೆಚ್ಚುವರಿಯಾಗಿ ಸೃಜಿಸಿ ಆದೇಶಿಸಲಾಗಿದೆ.

| ಕ್ರ.ಸಂ. | ಹುದ್ದೆಯ ಪದನಾಮ | ವೇತನ ಶ್ರೇಣಿ ರೂ. | ಹುದ್ದೆಗಳ ಸಂಖ್ಯೆ |
|---|---|---|---|
| 1 | ಸಹಾಯಕ ನಿರ್ದೇಶಕರು | 36300-53850 | 2(ಎರಡು) |
| 2 | ತನಿಖಾ ಸಹಾಯಕರು | 20000-36300 | 3(ಮೂರು) |
| 3 | ಪ್ರಥಮ ದರ್ಜೆ ಸಹಾಯಕರು | 14550-26700 | 2(ಎರಡು) |
| 4 | ಶೀಘ್ರಲಿಪಿಗಾರರು | 14550-26700 | 3(ಮೂರು) |
| 5 | ದ್ವಿತೀಯ ದರ್ಜೆ ಸಹಾಯಕರು | 11600-21000 | 3(ಮೂರು) |
| 6 | ವಾಹನ ಚಾಲಕರು | --- | 1(ಒಂದು)(ಹೊರಗುತ್ತಿಗೆ ಆಧಾರದ ಮೇಲೆ ಭರ್ತಿಮಾಡುವುದು) |
| 7 | ಗ್ರೂಪ್-ಡಿ | --- | 1(ಒಂದು) (ಹೊರಗುತ್ತಿಗೆ ಆಧಾರದ ಮೇಲೆ ಭರ್ತಿಮಾಡುವುದು) |
| | ಒಟ್ಟು | | 15(ಹದಿನೈದು) |

ಸದರಿ ಹುದ್ದೆಗಳ ವೇತನ ಮತ್ತು ಭತ್ಯೆಗಳನ್ನು ಆಯೋಗಕ್ಕೆ ಒದಗಿಸಲಾದ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 474 ವೆಚ್ಚ-3/2013 ದಿ:24.09.2013ರಲ್ಲಿ ನೀಡಿದ ಸಹಮತಿಯನುಸಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ .

(ಎನ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-2(ಪ್ರ)
ಸಮಾಜ ಕಲ್ಯಾಣ ಇಲಾಖೆ

ಇವರಿಗೆ:-

1. ಮಹಾಲೇಖಪಾಲರು, (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅನುಸೂಚಿತ ಜಾತಿ ಮತ್ತು ಬುಡಕಟ್ಟುಗಳ ಆಯೋಗ, ನಂ.14/3, ಸಿ.ಎಫ್‌ಸಿ ಬಿಲ್ಡಿಂಗ್, ಎರಡನೇ ಮಹಡಿ, ನೃಪತುಂಗ ರಸ್ತೆ, ಬೆಂಗಳೂರು.
4. ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಸಚಿವರ ಕಛೇರಿ, ಬೆಂಗಳೂರು.
5. ಆರ್ಥಿಕ ಇಲಾಖೆ (ವೆಚ್ಚ-3)
6. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳ ಶಾಖೆ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಉಪ ಕಾರ್ಯದರ್ಶಿ-2, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಶಾಖಾ ರಕ್ಷ ಕಡತ.
9. ಹೆಚ್ಚುವರಿ ಪ್ರತಿ-03.